# ವಾರ್ಡ್ ಸಭೆ ಸಂಖ್ಯೆ.22

ದಿನಾಂಕ:20.11.2021 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ವಾರ್ಡ್ ಅಭಿಯಂತರರು (ಕಾರ್ಯದರ್ಶಿಗಳು) ಅಧ್ಯಕ್ಷತೆಯಲ್ಲಿ ಕರೆಯಲಾಯಿತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ. ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. **(ಕಾರ್ಯದರ್ಶಿ)**
2. ಶ್ರೀ ಜಯಪಾಲ್ ಸದಸ್ಯರು.
3. ಶ್ರೀಮತಿ ಪ್ರೇಮ ಸದಸ್ಯರು.
4. ಕುಮಾರಿ ಕಮಲ ಸದಸ್ಯರು.
5. ಶ್ರೀ ರಾಜೇಶ್ ಸದಸ್ಯರು.
6. ಶ್ರೀ ಬಿ.ಆರ್ ಪುಟ್ಟಸ್ವಾಮಿ ಸದಸ್ಯರು.
7. ಶ್ರೀ ನಾಗೇಂದ್ರ ಸದಸ್ಯರು.
8. ಶ್ರೀ ಗೋಪಿ ಸದಸ್ಯರು.
9. ಶ್ರೀ ಛಾಯಾಪತಿ ಎಂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
10. ಶ್ರೀ ವಿಠಲ್ ಮೀಟರ್ ರೀಡರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ) ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ಜಮೀಲ್ ಸಹಾಯಕ ಅಭಿಯಂತರರು (ಬಿಬಿಎಂಪಿ ಬೀದಿ ದೀಪ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ನಿಂಗರಾಜು ಎನ್ ಕಂದಾಯ ಪರಿವೀಕ್ಷಕರು ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
14. ನಂದಿನಿ ಬಡಾವಣೆ ಪೋಲೀಸ್ ಠಾಣೆಯ ಅಧಿಕಾರಿಗಳು.
15. ಶ್ರೀ ದಿಲೀಪ್ ಮಾರ್ಷಲ್ ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ.ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | – |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | – |
| 3. | ಸದಸ್ಯರು ವ್ಯಾಕ್ಸಿನ್ ಬಗ್ಗೆ ಮಾಹಿತಿ ಕೋರಿದರು, ಇದಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಶಂಕರನಗರಕ್ಕೆ ಸಂಬಂಧಿಸಿದವರು ಸಭೆಗೆ ಹಾಜರಿರಲಿಲ್ಲ. | – |
| 4. | ಸಾರ್ವಜನಿಕರು 7ನೇ ಅಡ್ಡರಸ್ತೆ, ಶಂಕರನಗರ, ಶನಿಮಹಾತ್ಮ ದೇವಸ್ಥಾನದ ಹತ್ತಿರ ಹಾಗೂ 8ನೇ ಮುಖ್ಯರಸ್ತೆ, ಮುನೇಶ್ವರ ದೇವಸ್ಥಾನದ ಹತ್ತಿರ ಒಳಚರಂಡಿ ಹಾಳಾಗಿರುವು ಬಗ್ಗೆ ಸಭೆಗೆ ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟ ಇಲಾಖೆಗೆ ತಿಳಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ, |
| 5. | ಸಾರ್ವಜನಿಕರು ಶನಿಮಹಾತ್ಮ ದೇವಸ್ಥಾನದ ಹತ್ತಿರ ರಸ್ತೆ ಗುಂಡಿ ಬಿದ್ದಿರುವುದರಿಂದ ಕಾಂಕ್ರೀಟ್ ಹಾಕಿಸಕೊಡುವಂತೆ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಹಾಕಿಸಿಕೊಡಲಾಗುವುದು ಎಂದು ತಿಳಿಸಿದರು. | ವಾರ್ಡ್ ಅಭಿಯಂತರರು. |
| 6. | ಸಾರ್ವಜನಕರು ವಿಜಯಾನಂದನಗರದ 3ನೇ ಮುಖ್ಯರಸ್ತೆಯಲ್ಲಿ ಹೊಸದಾಗಿ 45 ದಿನಗಳ ಮುಂದೆ ನೀರಿನ ಮೀಟರ್ ಅನ್ನು ಅಳವಡಿಸಲಾಗಿರುತ್ತದೆ ಇನ್ನೂ ಸಹ ನೀರಿನ ಬಿಲ್ಲು ನೀಡಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಶ್ರೀ ವಿಠಲ್ ಮೀಟರ್ ರೀಡರ್ ರವರು ಈ ತಿಂಗಳು ನೀಡಲಾಗುವುದು ಎಂದು ತಿಳಿಸುತ್ತಾರೆ. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ, |
| 7. | ಶ್ರೀ ನಾಗೇಂದ್ರ ಸದಸ್ಯರು ರವರು ಬೋರ್‌ವೆಲ್ ಪ್ಯಾನಲ್‌ಗಳ ದುರಸ್ಥಿ ಬಗ್ಗೆ ಕೇಳಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂದಪಟ್ಟ ಇಲಾಖೆ ರವರಿಗೆ ನೋಟೀಸ್ ನೀಡಲಾಗಿರುತ್ತದೆ ಆದರೂ ಸಂಬಂದಪಟ್ಟವರು ಹಾಜರಾಗದ ಕಾರಣ ಸದರಿರವರ ಮೇಲಾಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ, |

| | | |
|---|---|---|
| 8. | ಶ್ರೀ ಕಾರ್ಯದರ್ಶಿಗಳು ಐ–ಮಾಸ್ಟ್ ದುರಸ್ಥಿ ಬಗ್ಗೆ ಮಾಹಿತಿ ಕೋರಿದರು. ಇದಕ್ಕೆ ಶ್ರೀ ಜಮಿಲ್ ಸಹಾಯಕ ಅಭಿಯಂಯತರರು (ಬಿಬಿಎಂಪಿ ಬೀದಿ ದೀಪ) ರವರು ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 16 ಐ–ಮಾಸ್ಟ್‌ಗಳು ಅಳವಡಿಸಲಗಿರುತ್ತದೆ ದಿನಾಂಕ:24.11.2021 ರಂದು ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಳ್ಳುತ್ತದೆ, ನಂತರ 15 ದಿನಗಳೊಳಗೆ ಎಲ್ಲಾ ಐ–ಮಾಸ್ಟ್‌ಗಳನ್ನು ರಿಪೇರಿ ಮಾಡಿಸುತ್ತೇವೆ ಎಂದು ಸಭೆಗೆ ತಿಳಿಸಿದರು | ಬೀದಿ ದೀಪಗಳ ನಿರ್ವಹಣೆ |
| 9. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರದಲ್ಲಿ ಬೀದಿ ದೀಪದ ಕಂಬ ಒಂದು ಮನೆಯ ಮೇಲೆ ವಾಲಿರುತ್ತದೆ ಅದನ್ನು ತೆರವುಗೊಳಿಸಿ ಹೊಸ ಕಂಬ ಅಳವಡಿಸಲು ಕೋರಿದರು. ಇದಕ್ಕೆ ಇದಕ್ಕೆ ಶ್ರೀ ಜಮಿಲ್ ಸಹಾಯಕ ಅಭಿಯಂಯತರರು (ಬಿಬಿಎಂಪಿ ಬೀದಿ ದೀಪ) ರವರು ಹೊಸ ಕಂಬ ಅಳವಡಿಸಲು ಅನುದಾನ ಇರುವುದಿಲ್ಲ ಎಂದು ಸಭೆಗೆ ತಿಳಿಸಿದರು. | ಬೀದಿ ದೀಪಗಳ ನಿರ್ವಹಣೆ |
| 10. | ಶ್ರೀ ನಾಗೇಂದ್ರ ಸದಸ್ಯರು ರವರು ಕಿರಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್ ಮಾಹಿತಿ ಕೇಳಿದರು, ಬ್ಲಾಕ್ ಸ್ಪಾಟ್ ಉತ್ಪತ್ತಿಯಾಗುವುದಕ್ಕೆ ಕಾರಣ ಹಾಗೂ ಬ್ಲಾಕ್ ಸ್ಪಾಟ್‌ಗನ್ನು ತೆರವುಗೊಳಿಸಲು ಕೋರಿದರು. ಇದಕ್ಕೆ ಕಿರಿಯ ಆರೋಗ್ಯ ಪರಿವೀಕ್ಷಕರು ಬ್ಲಾಕ್‌ಸ್ಪಾಟ್‌ಗಳ ಪಟ್ಟಿಯನ್ನು ನೀಡಿದರು. ಸದಸ್ಯರು ಬ್ಲಾಕ್ ಸ್ಪಾಟ್‌ಗಳನ್ನು ಯಾವಾಗ ತೆರವುಗೊಳಿಸಲಾಗುವುದು ಎಂದು ಕೋರಿದರು. ಇದಕ್ಕೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಸರಿಯಾದ ಮಾಹಿತಿ ನೀಡದ ಕಾರಣ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗ ರವರಿಗೆ ಮುಂದಿನ ಸಭೆಗೆ ಹಾಜರಾಗುವಂತೆ ಕೋರಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ |
| 11. | ಕಾವಲುಗಾರರ ಮೇಲೆ ಕಿಡಿಗೇಡಿಗಳು ಇಂದಿರಾ ಪ್ರಿಯದರ್ಶಿನಿ ಪಾರ್ಕ್‌ನಲ್ಲಿ ಹಲ್ಲೇ ನಡೆಸಿರುತ್ತಾರೆ ಎಂದು ಗುತ್ತಿಗೆದಾರರು ಸಭೆಗೆ ತಿಳಿಸಿದರು. ಇದಕ್ಕೆ ಪೋಲೀಸ್ ಅಧಿಕಾರಿಗಳು ಘಟನಾ ಸ್ಥಳದಲ್ಲಿ ಯಾವುದಾದರು ಸಿಸಿ ಕ್ಯಾಮರಗಳು ಇದೆಯೆ ಎಂದು ಕೆಳಿದರು. ಸಿಸಿ ಕ್ಯಾಮರ ಇದ್ದಲ್ಲಿ ಅಪರಾಧಿಗಳನ್ನು ಹಿಡಿಯಲು ಸಾದ್ಯವಾಗುತ್ತದೆ ಎಂದು ತಿಳಿಸಿದರು. ಇದಕ್ಕೆ ವಾರ್ಡ್ ಅಭಿಯಂತರರು ಸಿಸಿ ಕ್ಯಾಮರಾಗಳನ್ನು ಅಳವಡಿಸಲು ನಿಮ್ಮ ಠಾಣಾ ವ್ಯಾಪ್ತಿಯಲ್ಲಿ ಅತ್ಯವಶ್ಯಕವಿರುವ ಸ್ಥಳಗಳ ಪಟ್ಟಿ ನೀಡಿ ಎಂದು ತಿಳಿಸಿದರು. | – |
| 12. | ಸಭೆಯಲ್ಲಿ ಹಾಜರಿದ್ದ ಸದಸ್ಯರು ಶ್ರೀ ಸೋಮನಾಥ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ವಿಜಯಾನಂದನಗರದ ಒಳಚರಂಡಿ ವ್ಯವಸ್ಥೆಯ ಸರ್ವೆ ರಿಪೋರ್ಟ್ ಕೋರಿದರು. ಸದರಿ ವಿಷಯದ ಬಗ್ಗೆ ಕ್ರಮಕ್ಕಾಗಿ ಮೇಲಾಧಿಕಾರಿಗಳ ಕಛೇರಿಯಲ್ಲಿ ಪ್ರಗತಿಯಲ್ಲಿರುತ್ತದೆ ಎಂದು ಸದರಿ ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 13. | ಶ್ರೀ ಜಯಪಾಲ್ ರವರು ಗೌತಮನಗರದ ಒಳಚರಂಡಿಯನ್ನು ಹೊಸದಾಗಿ ನಿರ್ಮಾಣ ಮಾಡಲು ಕೋರಲಾಗಿದ್ದು, ತೆಗೆದುಕೊಂಡ ಕ್ರಮದ ಬಗ್ಗೆ ಕೋರಿದರು. ಸದರಿ ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿರವರು ಹಾಜರಿರಲಿಲ್ಲ. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 14. | ಸದಸ್ಯರು ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ಒಸಿ ಮತ್ತು ಸಿಸಿ ಇಲ್ಲದವರಿಗೆ ನೀರಿನ ಬಿಲ್ಲಿನ ಮೊತ್ತ ಎರಡರಷ್ಟು ಹಾಕಲಾಗುತ್ತಿರುತ್ತದೆ ಆದ್ದರಿಂದ ಈ ವಾರ್ಡ್ ವ್ಯಾಪ್ತಿಯಲ್ಲಿ ದಂಡ ಹಾಕಲಾಗುತ್ತಿರಿವ ಮನೆಗಳ ಪಟ್ಟಿಯನ್ನು ನೀಡುವಂತೆ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 15. | ಶ್ರೀ ನಾಗೇಂದ್ರ ಸದಸ್ಯರು ರವರು ಬೆಸ್ಕಾಂ ಇಲಾಖೆ ರವರು ಪಾದಚಾರಿ ಮಾರ್ಗಗಳಲ್ಲಿ ಕೇಬಲ್‌ಗಳನ್ನು ಯಾವಾಗ ತೆರವುಗೊಳಿಸುತ್ತಾರೆ ಹಾಗೂ ಕಾಟವು ಕೇಬಲ್‌ಗಳಿಗೆ ಕ್ಯಾಪ್‌ಗಳನ್ನು ಸಹ ಅಳವಡಿಸುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಮಾನ್ಯ ಅಧ್ಯಕ್ಷರು ಬೆಸ್ಕಾಂ ಇಲಾಖೆರವರಿಗೆ ಕ್ರಮಕೈಗೊಳ್ಳಲು ಸೂಚಿಸಿದರು. | ಬೆಸ್ಕಾಂ ಇಲಾಖೆ |
| 16. | ಶ್ರೀ ಪುಟ್ಟಸ್ವಾಮಿ ಸದಸ್ಯರು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

ಕಾರ್ಯದರ್ಶಿಗಳು

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44
ಮಾರಪ್ಪನಪಾಳ್ಯ